1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**545/2023**

ಹೆಸರುಃ ಸತ್ಯನಾರಾಯಣ ಚಾಸಾಃ 8

ತಂದೆಃ ಕೇಶವಯ್ಯ ಫ್ರಾಸಾ: 7

ವಯಸ್ಸುಃ 67

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಮುದ್ದೇನಹಳ್ಳಿ ಗ್ರಾಮ , ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 12-12-2023 ರಂದು ಪ್ರಮಾಣ ವಚನ ಭೋಧಿಸಲಾಯಿತು

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ನಾನು ಯಾವುದೇ ಘಟನೆಯನ್ನು ನೋಡಿರುವುದಿಲ್ಲ . ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ . ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ .

**(ಈ ಹಂತದಲ್ಲಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಹೇಳಿಕೆಯನ್ನು ನೋಡಲಾಗಿ ಸಾಕ್ಷಿಯು ಹೇಳಿಕೆಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿನಾಂಕಃ 13-01-2023 ರಂದು ಮಧ್ಯಾಹ್ನ 4.00 ಗಂಟೆಗೆ ನಾನು ನಮ್ಮ ತೋಟಕ್ಕೆ ನೀರು ಬಿಡಲು ಹೋಗಿದ್ದು ನಮ್ಮ ತೋಟದ ಪಕ್ಕದಲ್ಲಿ ಚಾಸಾ 1 ರವರ ತೋಟ

ಇರುತ್ತದೆ . ದಿಃ 13-01-2023 ರಂದು ಸಂಜೆ ಸುಮಾರು 5.00 ಗಂಟೆಯ ಸಮಯಕ್ಕೆ ----------- ಕುಡುಗೋಲು ಹಿಡಿದುಕೊಂಡು ಮೊಬೈಲ್ ಮತ್ತು ಸರವನ್ನು ಕಿತ್ತು ಕೊಂಡು ಹೋಗಿ ಆಸಾಮಿಯನ್ನು ತೋರಿಸಿದೆನು , ಆಗ ಅವರ ಹೆಸರು ಮಂಜುನಾಥ ಎಂದು ಗೊತ್ತಾಯಿತು , ಇನ್ನೊಬ್ಬ ವ್ಯಕ್ತಿಯು ಓಡಿ ಹೋಗುವುದನ್ನು ನೋಡಿದೆ ಅವನು ಬುಸ್ಸೇನಹಳ್ಳಿ ಗ್ರಾಮದ ರಮೇಶ ಎಂಬುವವನಾಗಿದುದ ಅವನನ್ನು ನೋಡಿರುತ್ತೇನೆ , ನನಗೆ ಮುಖ ಪರಿಚಯ ಇರುತ್ತದೆ , ನಾನು ಆರೋಪಿತರನ್ನು ನೋಡಿರುತ್ತೇನೆ ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ಈಗ ಓದಿ ಹೇಳಿ ಕೇಳಿದಂತೆ ದಿನಾಂಕಃ 16-01-2023 ರಂದು ಪೊಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ . ಅಲ್ಲಗಳೆದ ಹೇಳಿಕೆಯನ್ನು ನಿಪಿ. 14 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**